ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

14

ಇಲಾಖೆ / ವಿಷಯ : DEPARTMENT / SUBJECT: ಸಂಸತ್ತು - ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ

ದಿನಾಂಕ : DATE : 5/9/2020

# 2 ಶಿಫ್ಟ್‌ಗಳಲ್ಲಿ ಸಂಸತ್ ಕಲಾಪ!

ಕ.ಪ್ರ. 3/9/20

## ಕೊರೋನಾ ಹಿನ್ನೆಲೆ: ಬೆಳಗ್ಗೆ ರಾಜ್ಯಸಭೆ, ಮಧ್ಯಾಹ್ನ ಲೋಕಸಭೆ ಅಧಿವೇಶನ

## ಪ್ರಶ್ನೋತ್ತರ ಕಲಾಪ ರದ್ದು | ಇದೇ ಮೊದಲ ಬಾರಿ ಭಾನುವಾರವೂ ಕಲಾಪ



**ಕಲಾಪದ ಸಮಯ**

- **ರಾಜ್ಯಸಭೆ:** ಬೆಳಗ್ಗೆ 9ರಿಂದ ಮಧ್ಯಾಹ್ನ 1
- **ಲೋಕಸಭೆ:** ಮಧ್ಯಾಹ್ನ 3ರಿಂದ ಸಂಜೆ 7

ನವದೆಹಲಿ: ಸೆ.14ರಿಂದ ಅ.1ರವರೆಗೆ ನಡೆಯಲಿರುವ ಸಂಸತ್ತಿನ ಮುಂಗಾರು ಅಧಿವೇಶನ ಕೊರೋನಾ ವೈರಸ್ ಹಾವಳಿ ಹಿನ್ನೆಲೆಯಲ್ಲಿ ಹಲವು ಅಪರೂಪಗಳಿಗೆ ಸಾಕ್ಷಿಯಾಗಲಿದೆ. ಇದೇ ಮೊದಲ ಬಾರಿಗೆ ಸಂಸತ್ ಕಲಾಪವನ್ನು ಎರಡು ಪಾಳಿಗಳಲ್ಲಿ ನಡೆಸಲು ಉದ್ದೇಶಿಸಲಾಗಿದೆ. ಬೆಳಗ್ಗೆ ರಾಜ್ಯಸಭೆ ಹಾಗೂ ಮಧ್ಯಾಹ್ನ ಲೋಕಸಭೆ ನಡೆಯಲಿದ್ದು, ಸಾಮಾನ್ಯವಾಗಿ ರಜೆ ಇರುವ ಶನಿವಾರ ಮತ್ತು ಭಾನುವಾರಗಳಂದೂ ಕಲಾಪವನ್ನು ಮುಂದುವರಿಸಲು ತೀರ್ಮಾನಿಸಲಾಗಿದೆ.

ಮೊದಲ ದಿನ ಅಂದರೆ ಸೆ.14ರಂದು ಲೋಕಸಭೆ ಕಲಾಪ ಬೆಳಗ್ಗೆ 9 ಗಂಟೆಯಿಂದ ಮಧ್ಯಾಹ್ನ 1ರವರೆಗೆ ನಡೆಯಲಿದೆ. 2ನೇ ದಿನದಿಂದ ಅಕ್ಟೋಬರ್ 1ರವರೆಗೆ ಮಧ್ಯಾಹ್ನ 3 ಗಂಟೆಯಿಂದ ಸಂಜೆ 7ರವರೆಗೆ ನಡೆಯಲಿದೆ. ಇನ್ನು ರಾಜ್ಯಸಭೆ ಕಲಾಪ ಮೊದಲ ದಿನ ಮಧ್ಯಾಹ್ನ 3 ಗಂಟೆಯಿಂದ ಸಂಜೆ 7ರವರೆಗೆ ನಡೆಯಲಿದೆ. 2ನೇ ದಿನದಿಂದ ಅ.1ರವರೆಗೆ ಬೆಳಗ್ಗೆ 9 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ನಡೆಯಲಿದೆ. ಕೋವಿಡ್ ಕಾರಣ ಸಾಮಾಜಿಕ ಅಂತರ ಕಾಯ್ದುಕೊಂಡು ಕಲಾಪ ನಡೆಸಬೇಕಾಗಿರುವುದರಿಂದ ಆಯಾ ಕಲಾಪದ ಅವಧಿಗಳಲ್ಲಿ ರಾಜ್ಯಸಭೆ ಹಾಗೂ ಲೋಕಸಭೆ ಸದಸ್ಯರು ಎರಡೂ ಸದನಗಳಲ್ಲಿ ಕುಳಿತುಕೊಳ್ಳಲು ಆಸನ ವ್ಯವಸ್ಥೆ ಮಾಡಲಾಗುತ್ತಿದೆ. ಹೀಗಾಗಿ 2 ಪಾಳಿಗಳಲ್ಲಿ (ಶಿಫ್ಟ್) ಉಭಯ ಸದನಗಳ ಕಲಾಪ ವಿಭಜಿಸಲಾಗಿದೆ. ಶನಿವಾರ ಹಾಗೂ ಭಾನುವಾರಗಳಂದೂ ಕಲಾಪ ನಡೆಸಲು ನಿರ್ಧರಿಸಲಾಗಿದೆ. ಭಾನುವಾರ ಕಲಾಪ ನಡೆಯುತ್ತಿರುವುದು ಇದೇ ಮೊದಲು. ವೇಳೆ ಪ್ರಶ್ನೋತ್ತರ ಕಲಾಪ ಹಾಗೂ ಖಾಸಗಿ ವಿಧೇಯಕಗಳ ಮಂಡನೆಯನ್ನು ರದ್ದುಗೊಳಿಸಲಾಗಿದೆ.